| ಕರ್ನಾಟಕ ವಿಧಾನ ಪರಿಷತ್ತು | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1158(1408) |
| 2 | ಮಾನ್ಯ ಸದಸ್ಯರ ಹೆಸರು | ಶ್ರೀ. ಕೆ.ಅಬ್ದುಲ್ ಜಬ್ಬರ್ |
| 3 | ಉತ್ತರಿಸ ಬೇಕಾದ ದಿನಾಂಕ | 16.03.2026 |
| 4 | ಉತ್ತರಿಸಬೇಕಾದ ಸಚಿವರು | ವೈದ್ಯಕೀಯ ಶಿಕ್ಷಣ, ಮತ್ತು ಕೌಶಲ್ಯಾಭಿವೃದ್ಧಿ ಉದ್ಯಮ ಶೀಲತೆ ಹಾಗೂ ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು; ಸದರಿ ಕಾಲೇಜುಗಳಲ್ಲಿ ಬಹುತೇಕ ಮೂಲಸೌಕರ್ಯ ಕಾಲೇಜುಗಳಿಗೆ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ತೆಗೆದುಕೊಂಡ ಕ್ರಮಗಳು ಯಾವುವು; | ಬಂದಿದೆ.<br>ರಾಜ್ಯದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿ 22 ಸರ್ಕಾರಿ ವೈದ್ಯಕೀಯ ಕಾಲೇಜುಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿವೆ. ಸದರಿ ಕಾಲೇಜುಗಳ ಪೈಕಿ ಹಾಸನ, ಮಡಿಕೇರಿ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ಯಾದಗಿರಿ, ಕೊಪ್ಪಳ ಹಾಗೂ ಹಾವೇರಿ ವೈದ್ಯಕೀಯ ಕಾಲೇಜುಗಳು ಸೇರಿದಂತೆ ಒಟ್ಟು 8 ವೈದ್ಯಕೀಯ ಕಾಲೇಜುಗಳಿಗೆ ಬೋಧಕ ಸಿಬ್ಬಂದಿಗಳು, ಇತರೆ ಸೌಲಭ್ಯಗಳ ನ್ಯೂನ್ಯತೆಗಳಿಗೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳಲಾಗಿದೆ.<br><br>ಸದರಿ ನ್ಯೂನ್ಯತೆಯ ವರದಿಯನ್ನು ರಾಷ್ಟ್ರೀಯ ವೈದ್ಯಕೀಯ ಆಯೋಗಕ್ಕೆ ಸಲ್ಲಿಸಲಾಗಿದ್ದು, ಸಲ್ಲಿಸಲಾಗಿರುವ ವರದಿಯನ್ನು ಪರಿಗಣಿಸಿ NMC Conditional Renewal ಅನ್ನು ಎಲ್ಲಾ 8 ಸರ್ಕಾರಿ ವೈದ್ಯಕೀಯ ಸಂಸ್ಥೆಗಳಿಗೆ ನೀಡಿರುತ್ತದೆ. |
| | ಸಂಯೋಜಿತ ಆಸ್ಪತ್ರೆಗಳಲ್ಲಿ (Teaching Hopitals) ಹಾಸಿಗೆಗಳ ಮತ್ತು ವೈದ್ಯರ ಹುದ್ದೆಗಳ ಕೊರತೆಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳಾವುವು; | ರಾಷ್ಟ್ರೀಯ ವೈದ್ಯಕೀಯ ಆಯೋಗದ ಮಾರ್ಗಸೂಚಿಗಳನ್ವಯ ಜನಸಂಖ್ಯೆಗೆ ಅನುಗುಣವಾಗಿ ಸಂಯೋಜಿತ ಆಸ್ಪತ್ರೆಗಳಲ್ಲಿ ಅಗತ್ಯವಿರುವ ಹಾಸಿಗೆಗಳ ಮತ್ತು ವೈದ್ಯರ ಹುದ್ದೆಗಳ ಸಂಖ್ಯೆಯನ್ನು ಹೆಚ್ಚಿಸುವ ಬಗ್ಗೆ ಕಾಲಕಾಲಕ್ಕೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಿ ಅನುಮೋದನೆ ಪಡೆದುಕೊಂಡು ಕ್ರಮವಹಿಸಲಾಗುತ್ತಿದೆ. |
| ಇ) | ವೈದ್ಯಕೀಯ ಕಾಲೇಜುಗಳಿಗೆ ಸಂಯೋಜಿತ ಆಸ್ಪತ್ರೆಗಳಲ್ಲಿ ಉಪಕರಣಗಳ ಕೊರತೆ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ವೈದ್ಯಕೀಯ ಕಾಲೇಜುಗಳಿಗೆ ಸಂಯೋಜಿತ ಆಸ್ಪತ್ರೆಗಳಲ್ಲಿ ಅಗತ್ಯವಿರುವ ಉಪಕರಣಗಳನ್ನು ಖರೀದಿಸಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಿ ಅನುಮೋದನೆ ಪಡೆದುಕೊಂಡು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| ಈ) | ಹೊಸ ವೈದ್ಯಕೀಯ ಕಾಲೇಜುಗಳ ಸ್ಥಾಪನೆಗೆ ಸರ್ಕಾರದ ಯೋಜನೆಗಳು ಯಾವುವು? (ಜಿಲ್ಲಾವಾರು ಮಾಹಿತಿ ಒದಗಿಸುವುದು) | ಸರ್ಕಾರವು ಈಗಾಗಲೇ ಬೆಂಗಳೂರು ದಕ್ಷಿಣ ಜಿಲ್ಲೆಯ ರಾಮನಗರ, ಕನಕಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸಲು RGUHS ವತಿಯಿಂದ ಕ್ರಮ ಕೈಗೊಳ್ಳಲಾಗಿದೆ.<br><br>2026-27 ನೇ ಆಯವ್ಯಯದ ಘೋಷಣೆಯನ್ವಯ ಕೋಲಾರ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ವಿಸ್ತೃತ ಯೋಜನಾ ವರದಿ ತಯಾರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>2025-26 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಬನ್ನೂರು ಗ್ರಾಮದ ಸೇಡಿಯಾಪು ಬಳಿ 300 ಹಾಸಿಗೆಗಳ ಆಸ್ಪತ್ರೆಯನ್ನು ನಿರ್ಮಿಸಲು ಸಿವಿಲ್ ಕಾಮಗಾರಿಯ ರೂ.180.00 ಕೋಟಿಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಕ್ರಮಹಿಸಲಾಗುತ್ತಿದೆ.<br><br>ತುಮಕೂರು, ಬೆಂಗಳೂರು ಗ್ರಾಮಾಂತರ ಉಡುಪಿ, ವಿಜಯನಗರ, ದಕ್ಷಿಣ ಕನ್ನಡ, ಮತ್ತು ದಾವಣಗೆರೆ ಜಿಲ್ಲೆಗಳಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡುವ ಬಗ್ಗೆ ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ:ಎಂಇಡಿ 84 ಆರ್‌ಐ 2026

(ಡಾ|| ಶರಣ ಪ್ರಕಾಶ ಆರ್. ಪಾಟೀಲ್)
ವೈದ್ಯಕೀಯ ಶಿಕ್ಷಣ, ಮತ್ತು ಕೌಶಲ್ಯಾಭಿವೃದ್ಧಿ
ಉದ್ಯಮ ಶೀಲತೆ ಹಾಗೂ ಜೀವನೋಪಾಯ ಸಚಿವರು